# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 102/2024 |
| ಸಿ.ಡಬ್ಲೂ | : 08 |
| ಪಿ.ಡಬ್ಲೂ | : 05 |
| ಸಾಕ್ಷಿಯ ಹೆಸರು | : ಜಗದೀಶ ಬಸವರಾಜ ಮೆಣಸಿನಕಾಯಿ |
| ವಯಸ್ಸು | : 25 ವರ್ಷ |
| ಉದ್ಯೋಗ | : ಖಾಸಗಿ ಕೆಲಸ |
| ವಾಸ ಸ್ಥಳ | : ವರೂರ. |

ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕಃ 20.06.2026.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಪ್ರಕರಣದ ಆರೋಪಿತರ ಪರಿಚಯವಿದೆ. ಚಾಸಾ-1 ರಿಂದ 7 ರವರ ಪರಿಚಯ ಇದೆ. ಈ ಪ್ರಕರಣದ ಬಗ್ಗೆ ನನಗೇನು ಮಾಹಿತಿ ಇಲ್ಲ. ಈ ಪ್ರಕರಣಕ್ಕೆ ಸಂಬಂದಿಸಿ ನಾನು ಪೋಲಿಸರಿಗೆ ಯಾವುದೇ ಹೇಳಿಕೆಗಳನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ- ಮಾನ್ಯ ಸ.ಸ.ಅ. ರವರಿಂದಃ**

ದಿಃ 10.07.2021 ರಂದು ಬೆ.09.00 ಗಂಟೆಗೆ ಚಾಸಾ-1 ರವರು ನಮ್ಮ ಮನೆಯ ಹಿತ್ತಲಲ್ಲಿ ಮುಸುರಿ ಚೆಲ್ಲಿದ್ದರ ಸಿಟ್ಟಿನಿಂದ ಆರೋಪಿತರು ಅಕ್ರಮಕೂಟವನ್ನು ರಚಿಸಿಕೊಂಡು ಬಂದು 1 ನೇ ಆರೋಪಿ ಚಾಸಾ-1 ರವರಿಗೆ ಭೋಸಡಿ ಎಂದು ಅವಾಚ್ಯವಾಗಿ ಬೈದಿರುತ್ತಾರೆ ಎಂದರೆ ಸರಿಯಲ್ಲ. ಅದನ್ನು ಪ್ರಶ್ನಿಸಿದ ಚಾಸಾ-4 ರವರಿಗೆ 2 ಮತ್ತು 3 ನೇ ಆರೋಪಿತರು ಹೊಡೆಬಡೆ ಮಾಡಿದ್ದು, 3 ನೇ ಆರೋಪಿ ಬಡಿಗೆಯಿಂದ ಚಾಸಾ-4 ರವರ ದುಬ್ಬಕ್ಕೆ ಹೊಡೆದಿದ್ದು, 2 ನೇ ಆರೋಪಿ ಕೈಯಿಂದ ಚಾಸಾ-4 ರವರ ಕಪಾಳಕ್ಕೆ ಹಾಗೂ ತಲೆಗೆ ಹೊಡೆದು ಸಾದಾ ಗಾಯಪಡಿಸಿರುತ್ತಾರೆ ಎಂದರೆ ಸರಿಯಲ್ಲ.

ನಂತರ ಜಗಳ ಬಿಡಿಸಲು ಬಂದ ಚಾಸಾ-1 ರವರಿಗೆ ಕೈಹಿಡಿದು ಎಳೆದಾಡಿದ್ದು, 4 ನೇ ಆರೋಪಿ ಕೈಯಿಂದ ಹೊಡೆಬಡೆ ಮಾಡಿ ಕಾಲಿನಿಂದ ಒದ್ದು, ಸಾದಾ ಗಾಯಪಡಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಜಗಳ ಬಿಡಿಸಲು ಬಂದ ಚಾಸಾ-5 ರವರಿಗೆ 4 ನೇ ಆರೋಪಿ ನೆಲಕ್ಕೆ ಕೆಡವಿ ಗಾಯ ಪಡಿಸಿ ಜೀವ ಬೆದರಿಕೆ ಹಾಕಿರುತ್ತಾನೆಂದರೆ ಸರಿಯಲ್ಲ. ಈ ಮೇಲಿನಂತೆ ಪೋಲಿಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಲ್ಲಗಳೆದ ಭಾಗವನ್ನು **ನಿಪಿ-5** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯವಾಗಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ- ಆರೋಪಿತರ ಪರ ಶ್ರೀ ಎನ್ ವಾಯ್ ಎಚ್ ವಕೀಲರಿಂದಃ**

ಏನೂ ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**